ಕರ್ನಾಟಕ ಸರ್ಕಾರ
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)
Government of Karnataka
Karnataka Residential Educational Institutions Society
(An Organisation of Govt. of Karnataka)

ಕವಶಿಸಸ/ಆಡಳಿತ/ನೇ.ನೇ-ಹೆಆ ಪ/ಸಿ.ಆರ್ /2023-24 ದಿನಾಂಕ: 24-11-2023

## ತಿಳುವಳಿಕೆ ಪತ್ರ

ವಿಷಯ: ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹೆಚ್ಚುವರಿ ಆಯೆಪಟ್ಟಿಯಲ್ಲಿಆಯ್ಕೆಯಾದ ಕನ್ನಡ, ಆಂಗ್ಲ ಭಾಷೆ, ವಿಜ್ಞಾನ, ಗಣಿತ, ಗಣಕಯಂತ್ರ,, ದೈಹಿಕ ಶಿಕ್ಷಣ ಶಿಕ್ಷಕರ ಹಾಗೂ ಪ್ರ.ದ.ಸ, ನಿಲಯಪಾಲಕರು ಹಾಗೂ ಶುಶ್ರೂಷಕರ ಅಭ್ಯರ್ಥಿಗಳ ಕೌನ್ಸಿಲಿಂಗ್ ಮಾಡುವ ಬಗ್ಗೆ,

ಉಲ್ಲೇಖ: ಆಯೋಗದ ಅಧಿಸೂಚನೆ ಸಂಖ್ಯೆ: ಆರ್(2) 1084/2017-18/ಪಿಎಸ್ ಸಿ ದಿ:23-06-17

*****

-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳಲ್ಲಿ ಖಾಲಿ ಇರುವ ಗ್ರೂಪ್ 'ಸಿ' ವೃಂದದ ಹೆಚ್ಚುವರಿ ಆಯೆಪಟ್ಟಿಯಲ್ಲಿಆಯ್ಕೆಯಾದ ಕನ್ನಡ, ಆಂಗ್ಲ ಭಾಷೆ, ವಿಜ್ಞಾನ, ಗಣಿತ, ಗಣಕಯಂತ್ರ, ದೈಹಿಕ ಶಿಕ್ಷಣ ಶಿಕ್ಷಕರ ಹಾಗೂ ಪ್ರ.ದ.ಸ, ನಿಲಯಪಾಲಕರು ಹಾಗೂ ಶುಶ್ರೂಷಕರ ಹುದ್ದೆಗಳ ನೇಮಕಾತಿಯನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಹಮ್ಮಿಕೊಂಡಿದ್ದು, ಅರ್ಹ ಅಭ್ಯರ್ಥಿಗಳ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಆಯೋಗವು ಪ್ರಕಟಿಸಿದೆ. ಸದರಿ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿ ಸಂಘದಿಂದ ಆಯೋಜಿಸಲಾಗಿರುವ ದಾಖಲಾತಿ ಪರಿಶೀಲನೆಗೆ ಹಾಜರಾಗಿರುವ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗಾಗಿ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಈ ಕೆಳಕಂಡಂತೆ ಆಯೋಜಿಸಿದೆ.

<table>
<tr><th>ವಿಷಯ</th><th>ದಿನಾಂಕ</th></tr>
<tr><td>ಕನ್ನಡ ಭಾಷಾ ಶಿಕ್ಷಕರು</td><td rowspan="4">29-11-2023</td></tr>
<tr><td>ಇಂಗ್ಲೀಷ್ ಶಿಕ್ಷಕರು</td></tr>
<tr><td>ವಿಜ್ಞಾನ ಶಿಕ್ಷಕರು</td></tr>
<tr><td>ಗಣಿತ ಶಿಕ್ಷಕರು</td></tr>
<tr><td>ಎಫ್.ಡಿ.ಎ ಕಂ ಕಂಪ್ಯೂಟರ್ ಆಪರೇಟರ್</td><td rowspan="5">01.12.2023</td></tr>
<tr><td>ಕಂಪ್ಯೂಟರ್ ಶಿಕ್ಷಕರು</td></tr>
<tr><td>ದೈಹಿಕ ಶಿಕ್ಷಣ ಶಿಕ್ಷಕರು</td></tr>
<tr><td>ನಿಲಯ ಪಾಲಕರು</td></tr>
<tr><td>ಶುಶ್ರೂಷಕರು</td></tr>
</table>

ಮೇಲ್ಕಂಡ ಅಭ್ಯರ್ಥಿಗಳು ಕೌನ್ಸಿಲಿಂಗ್ ಪ್ರಕ್ರಿಯೆಗೆ ಹಾಜರಾಗುವ ಸಂದರ್ಭದಲ್ಲಿ ಈ ಪತ್ರದೊಂದಿಗೆ ಲಗತ್ತಿಸಿರುವ ಮಾದರಿಯಂತೆ ರೂ 100 ಗಳ ಛಾಪಾ ಕಾಗದದಲ್ಲಿ ನೋಟರಿಯೊಂದಿಗೆ ಕಡ್ಡಾಯವಾಗಿ ಹಾಜರುಪಡಿಸಲು ಸೂಚಿಸಿದೆ. ನಿಗಧಿಪಡಿಸಿದ ದಿನಾಂಕದ ನಂತರ ಹಾಜರಾಗುವ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸುವುದಿಲ್ಲ.

Signed by
NAVEEN KUMAR RAJU S
Date: 24-11-2023 11:12:58
**ಕಾರ್ಯನಿರ್ವಾಹಕ ನಿರ್ದೇಶಕರು.**

ನಂ.8, ಎಮ್.ಎಸ್.ಬಿ.-1,6&7ನೇ ಮಹಡಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು-560052, ದೂರವಾಣಿ: 080-22283366, 222265755, 22204466, 22207722, ಟೆಲಿಫ್ಯಾಕ್ಸ್ : 080-22262288
#8, M.S.B-1,6th & 7th Floor, Cunningham Road, Bengaluru-560052. Phone: 080-22283366, 222265755, 22204466, 22207722, Telefax : 080-22262288
Email : edkreis@rediffmail.com, ed.kreis@ka.gov.in Website : www.kreis.kar.nic.in

ಶ್ರೀ/ಶ್ರೀಮತಿ/ಕುಮಾರ/ಕುಮಾರಿ ------------------------ ಆದ ನಾನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ವಸತಿ ಶಾಲೆಗಳಲ್ಲಿನ "ಸಿ" ವೃಂದದ ಹುದ್ದೆಗಳ ನೇರ ನೇಮಕಾತಿಯ ಸಂಬಂಧ ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ಸಂಖ್ಯೆ:ಆರ್(2)1084/2017-18/ ಪಿ.ಎಸ್.ಸಿ, ದಿನಾಂಕ:23.06.2017 ರಂತೆ ------------- ------ ಹುದ್ದೆಗೆ ಹೆಚ್ಚುವರಿ ಆಯ್ಕೆಪಟ್ಟಿಯಲ್ಲಿ ಕ್ರ ಸಂ ---- ರ ನೊಂದಣಿ ಸಂಖ್ಯೆ ------ ರಂತೆ ಆಯ್ಕೆಯಾಗಿದ್ದು, ದಿನಾಂಕ --- ರಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ನಡೆದ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಿ ಎಲ್ಲಾ ಮೂಲ ದಾಖಲೆಗಳನ್ನು ಒದಗಿಸಿರುತ್ತೇನೆ.

ದಿನಾಂಕ ---------ರಂದು ಕೌನ್ಸಿಲಿಂಗ್‌ಗೆ ಹಾಜರಾಗಿರುವ ನಾನು ಈ ಕೆಳಕಂಡ ನಿಬಂಧನೆಗಳಿಗೆ ಒಳಗೊಂಡಂತೆ ಈ Affidavit ನ್ನು ಸಲ್ಲಿಸುತ್ತಿದ್ದೇನೆ.

1. ನೇಮಕಾತಿ ಆದೇಶದ ಪ್ರತಿಯನ್ನು ಪಡೆದ ನಂತರ ಸ್ಥಳ ನಿಯುಕ್ತಿಗೊಳಿಸಿದ ವಸತಿ ಶಾಲೆಯಲ್ಲಿ 15 ದಿನಗಳೊಳಗಾಗಿ ಸಂಬಂಧಿಸಿದ ಶಾಲೆಯ ಪ್ರಾಂಶುಪಾಲರ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾಗುತ್ತೇನೆ. ಇಲ್ಲವಾದಲ್ಲಿ ಈ ಆದೇಶವನ್ನು ರದ್ದುಗೊಳಿಸಬಹುದಾಗಿರುತ್ತದೆ.
2. ನನ್ನ ನೇಮಕಾತಿ ಆದೇಶಕ್ಕೆ ಸಂಬಂಧಿಸಿದಂತೆ ಭವಿಷ್ಯದಲ್ಲಿ ಉದ್ಭವಿಸಬಹುದಾದ ಮಾನ್ಯ ನ್ಯಾಯಾಲಯಗಳ ತೀರ್ಪುಗಳು ಹಾಗೂ ಸರ್ಕಾರದ ತೀರ್ಮಾನಗಳಿಗೆ ಒಳಪಟ್ಟಿರುತ್ತೇನೆ.
3. ನೇಮಕಾತಿ ಆದೇಶವನ್ನು ಪಡೆಯಲು ನಾನು ಒದಗಿಸಿರುವ ಮಾಹಿತಿಗಳು ಸತ್ಯವೆಂದು ಹಾಗೂ ಕರ್ನಾಟಕ ಲೋಕಸೇವಾ ಆಯೋಗದಿಂದ ಹೊರಡಿಸಲಾಗಿರುವ ಹೆಚ್ಚುವರಿ ಆಯ್ಕೆಪಟ್ಟಿಯಲ್ಲಿನ ಜೇಷ್ಟತೆಗೆ ಬದ್ಧನಾಗಿರುತ್ತೇನೆ ಎಂದು, ಒಂದು ವೇಳೆ ಒದಗಿಸಿದ ಮಾಹಿತಿ/ದಾಖಲೆಗಳು ಭವಿಷ್ಯದಲ್ಲಿ ಕೃತ್ರಿಮ ಅಥವಾ ತಪ್ಪು ಎಂದು ಕಂಡುಬಂದಲ್ಲಿ ನನ್ನ ನೇಮಕಾತಿಯನ್ನು ರದ್ದುಪಡಿಸಲು ಒಪ್ಪಿರುತ್ತೇನೆ.
4. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಎಲ್ಲಾ ನಿಯಮಗಳು, ಕೆ.ಸಿ.ಎಸ್ ನಿಯಮಗಳು ಹಾಗೂ ಮಾರ್ಗ ಸೂಚಿಗಳಿಗೆ ಬದ್ಧನಾಗಿರುತ್ತೇನೆ.
5. ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಗಳನ್ನು ಅಪೇಕ್ಷಿಸುವುದಿಲ್ಲ.
6. ಮುಂದಿನ ದಿನಗಳಲ್ಲಿ ಜಾತಿ ಸಿಂಧುತ್ವ ಪ್ರಮಾಣ ಪತ್ರ ಅವಶ್ಯವಿದ್ದಲ್ಲಿ ಸಂಘದ ಕೇಂದ್ರ ಕಛೇರಿಯಿಂದ ಸೂಚನೆ ನೀಡಿದ ಸಂದರ್ಭದಲ್ಲಿ ಜಾತಿ ಸಿಂಧುತ್ವ ಪ್ರಮಾಣ ಪತ್ರವನ್ನು ಮಾಡಿಸಿಕೊಡುತ್ತೇನೆ. ಒಂದು ವೇಳೆ ಸಿಂಧುತ್ವ ಪ್ರಮಾಣ ಪತ್ರದಲ್ಲಿ ಆಯ್ಕೆಯಾದ ಜಾತಿ/ಪ್ರವರ್ಗದಲ್ಲಿ ವ್ಯತ್ಯಾಸ ಕಂಡು ಬಂದಲ್ಲಿ ಅದಕ್ಕೆ ನಾನೇ ಜವಾಬ್ದಾರರಾಗಿದ್ದು, ಅಂತಹ ಸಂದರ್ಭದಲ್ಲಿ ಸಂಘವು ನನ್ನ ನೇಮಕಾತಿ ಆದೇಶವನ್ನು ರದ್ದುಪಡಿಸಲು ಒಪ್ಪಿರುತ್ತೇನೆ ಎಂದು ದೃಢೀಕರಿಸಿರುತ್ತೇನೆ.

ಮೇಲ್ಕಂಡ ಎಲ್ಲಾ ನಿಬಂಧನೆಗಳನ್ನು ಒಪ್ಪಿ ಪ್ರಮಾಣಿಕರಿಸಿ ಈ ಕೆಳಗೆ ಸಹಿ ಮಾಡಿರುತ್ತೇನೆ.

ದಿನಾಂಕ: ಅಭ್ಯರ್ಥಿಯ ಸಹಿ

ಸ್ಥಳ :